ಮೆಟ್ರೋ ಸಂಚಾರ ಅವಧಿ ವಿಸ್ತರಣೆ

ಬೆಂಗಳೂರು: ಶುಕ್ರವಾರ (ಏ. 26) ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ನಮ್ಮ ಮೆಟ್ರೋ ಸೇವೆಯ ಸಮಯವನ್ನು ವಿಸ್ತರಿಸಿದೆ. ಅಂದು ನಗರದ ಎಲ್ಲಾ ನಾಲ್ಕು ಟರ್ಮಿನಲ್‌ಗಳಾದ ನಾಗಸಂದ್ರ, ರೇಷ್ಮೆ ಸಂಸ್ಥೆ, ಚಲ್ಲಘಟ್ಟ, ವೈಟ್ ಫೀಲ್ಡ್ (ಕಾಡುಗೋಡಿ) ನಿಲ್ದಾಣಗಳಿಂದ ಕೊನೆಯ ರೈಲು ಸೇವೆಯನ್ನು ರಾತ್ರಿ 23.55ರವರೆಗೆ ವಿಸ್ತರಣೆ ಮಾಡಲಾಗಿದೆ.

ಕೊನೆಯ ಮೆಟ್ರೋ ತಲುಪುವ ಸಮಯದ ಕುರಿತು ನಮ್ಮ ಮೆಟ್ರೋ ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ಮಾಹಿತಿ ನೀಡಿದ್ದಾರೆ. ನಗರದ ನಾಡಪ್ರಭು ಕೆಂಪೇಗೌಡ ನಿಲ್ದಾಣ ಮೆಜೆಸ್ಟಿಕ್‌ನಿಂದ ಎಲ್ಲಾ ನಾಲ್ಕು ದಿಕ್ಕುಗಳಿಗೆ ಕೊನೆಯ ರೈಲು ದಿನಾಂಕ ಏಪ್ರಿಲ್ 27 ರಂದು ಮಧ್ಯರಾತ್ರಿ 00.35 ಗಂಟೆಗೆ (ಮಧ್ಯರಾತ್ರಿ 12.35) ತಲುಪಲಿವೆ ಎಂದು ತಿಳಿಸಿದ್ದಾರೆ.

ರಣಧೀರ ಕಂಠೀರವ ಅಭಿಮಾನಿಗಳ ಸಂಘದ ವತಿಯಿಂದ ಯಲಹಂಕದ ನಗರ್ತಪೇಟೆಯಲ್ಲಿ ವರನಟ ಡಾ.ರಾಜಕುಮಾರ್ ರವರ 96ನೇ ಜನ್ಮದಿನವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಸಂಘದ ಶೇಖರ್, ಭಾಸ್ಕರ್, ನಾರಾಯಣ, ನಾಗರಾಜ್, ಮು.ಕೃಷ್ಣಮೂರ್ತಿ, ಯಲಹಂಕ ಶಕ್ತಿ ಸ್ನೇಹಕೂಟದ ರಾಜುಶೆಟ್ಟಿ ಇದ್ದರು.

ಶುಕ್ರವಾರದ ಫೋನ್ ಇನ್ ಕಾರ್ಯಕ್ರಮ ಇಲ್ಲ

ಬೆಂಗಳೂರು: ರಾಜಧಾನಿ ಬೆಂಗಳೂರಿನಲ್ಲಿ ಲೋಕಸಭೆ ಚುನಾವಣೆ ಮತದಾನ ಏ.26ರ ಶುಕ್ರವಾರ ನಡೆಯುವುದರಿಂದ ಜಲ ಮಂಡಳಿ ಅಧ್ಯಕ್ಷರು ನಡೆಸಿಕೊಡುವ ಕುಂದುಕೊರತೆಗಳ ಫೋನ್‌ಇನ್ ಕಾರ್ಯಕ್ರಮ ಇರುವುದಿಲ್ಲ. ಮುಂದಿನ ಶುಕ್ರವಾರ (ಮೇ 3ಕ್ಕೆ) ಎಂದಿನಂತೆ ಫೋನ್ ಇನ್ನ ಕಾರ್ಯಕ್ರಮ ನಡೆಯಲಿದೆ ಎಂದು ಜಲಮಂಡಳಿ ಪ್ರಕಟಣೆ ತಿಳಿಸಿದೆ.

ಸಾರ್ವಜನಿಕರು ತಮ್ಮ ವಲಯ ಪ್ರದೇಶದಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳಿ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಗಳ ಕುರಿತು ಜಲಮಂಡಳಿಯ ಸಹಾಯವಾಣಿ 1916 ಮೂಲಕವೂ ದೂರು ನೀಡಬಹುದು ಎಂದು ಮಂಡಳಿ ಹೇಳಿದೆ.

43,123 ಸಿಬ್ಬಂದಿ ನಿಯೋಜನೆ
ನಗರದಲ್ಲಿ 8,984 ಮತಗಟ್ಟೆಗಳ ಸ್ಥಾಪನೆ

ಮತಗಟ್ಟೆ ಅಧಿಕಾರಿಗಳ ರ‍್ಯಾಂಡಮೈಸೇಷನ್ ಪೂರ್ಣ

ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಅವರು ಮತಗಟ್ಟೆ ಅಧಿಕಾರಿಗಳ ಅಂತಿಮ ಹಂತದ ರ‍್ಯಾಂಡಮೈಸೇಷನ್ ನಡೆಸಿದರು. ಹಿರಿಯ ಅಧಿಕಾರಿಗಳು ಇದ್ದರು.

ಬೆಂಗಳೂರು: ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಶುಕ್ರವಾರ (ಏ.26) ಮತದಾನ ನಡೆಯಲಿರುವ ಹಿನ್ನೆಲೆಯಲ್ಲಿ ಮತಗಟ್ಟೆ ಅಧಿಕಾರಿಗಳ ಅಂತಿಮ ಹಂತದ ರ‍್ಯಾಂಡಮೈಸೇಷನ್‌ಅನ್ನು ಮಲ್ಲೇಶ್ವರದ ಐಪಿಪಿ ಕೇಂದ್ರದಲ್ಲಿ ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ಅವರು ಸಾಮಾನ್ಯ ವೀಕ್ಷಕರ ಸಮ್ಮುಖದಲ್ಲಿ ನಡೆಸಿದ್ದಾರೆ.

ಜಿಲ್ಲಾ ಚುನಾವಣಾಧಿಕಾರಿಗಳ ವ್ಯಾಪ್ತಿಯಲ್ಲಿ ಬೆಂಗಳೂರು ಕೇಂದ್ರ, ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ ಸೇರಿದಂತೆ ಮೂರು ಲೋಕಸಭಾ ಕ್ಷೇತ್ರಗಳು ಬರಲಿವೆ. ಮೂರು ಲೋಕಸಭಾ ಕ್ಷೇತ್ರಗಳಲ್ಲಿ 24 ವಿಧಾನಸಭಾ ಕ್ಷೇತ್ರಗಳು ಬರಲಿದ್ದು, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ 1 ವಿಧಾನಸಭಾ ಕ್ಷೇತ್ರ ಹಾಗೂ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರಕ್ಕೆ 3 ಕ್ಷೇತ್ರಗಳು ಬರಲಿವೆ. ಎಲ್ಲಾ 28 ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟಾರೆ 43,123 ಮತಗಟ್ಟೆ ಅಧಿಕಾರಿ ಮತ್ತು ಸಿಬ್ಬಂದಿ ನಿಯೋಜಿಸಿದ್ದು, ಜತೆಗೆ 305 ವಲ್ನರಬಲ್ ಹಾಗೂ ಕ್ರಿಟಿಕಲ್ ಮತಗಟ್ಟೆಗಳಿಗಾಗಿ 385 ಮೈಕ್ರೋ ಅಬ್ಸರ್ವರ್‌ಗಳನ್ನು ನಿಯೋಜನೆ ಮಾಡಲಾಗಿದೆ. ಅವರೆಲ್ಲರ ಅಂತಿಮ ರ‍್ಯಾಂಡಮೈಸೇಷನ್ ಮಾಡಲಾ ಯಿತು. ಲೋಕಸಭಾ ಚುನಾವಣೆಗೆ ನಿಯೋಜಿಸಿ ಕೊಂಡಿರುವ ಮತಗಟ್ಟೆ ಅಧಿಕಾರಿಗಳಿಗೆ ಆಯಾ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಚುನಾ ವಣಾ ಪ್ರಕ್ರಿಯೆ ಕುರಿತು ಎರಡು ಬಾರಿ ತರಬೇತಿ ನೀಡಲಾಗಿದೆ. ಸಾಮಾನ್ಯ ವೀಕ್ಷಕರಾದ ಗಾಯತ್ರಿ ರಾಥೋರ್, ವಾಣಿ ಮೋಹನ್, ಮಕರಂದ್ ಪಾಂಡುರಂಗ, ಚುನಾವಣಾ ವಿಭಾಗದ ವಿಶೇಷ ಆಯುಕ್ತ ಸೆಲ್ವಮಣಿ, ಅಪರ ಜಿಲ್ಲಾ ಚುನಾ ವಣಾಧಿಕಾರಿಗಳಾದ ಡಾ. ಹರೀಶ್ ಕುಮಾರ್, ಕೆ.ಎ.ದಯಾನಂದ್, ವಿನೋತ್ ಪ್ರಿಯಾ, ಸ್ನೇಹಲ್, ಸಹಾಯಕ ಆಯುಕ್ತ ರವಿ ಚಂದ್ರ ನಾಯ್ಕ್, ಜಿಲ್ಲಾ ಮಟ್ಟದ ಮಾನವ ಸಂಪನ್ಮೂಲ ನೋಡಲ್ ಅಧಿಕಾರಿ ಡಿ.ಆರ್.ಅಶೋಕ್ ಇದ್ದರು.

ಬಿಜೆಪಿ ಎಕ್ಸ್ ಖಾತೆ ವಿರುದ್ಧ ಎಫ್‌ಐಆರ್

ಬೆಂಗಳೂರು: ಕಾಂಗ್ರೆಸ್ ಪ್ರಣಾಳಿಕೆ ಬಗ್ಗೆ ಪ್ರಚೋದನಾಕಾರಿ ಪೋಸ್ಟ್ ಪ್ರಕಟಿಸಿದ್ದ ಆರೋಪದಡಿ ಬಿಜೆಪಿಯ ಎಕ್ಸ್ ಖಾತೆ ನಿರ್ವಹಣೆ ಮಾಡುವವರ ವಿರುದ್ಧ ಮಲ್ಲೇಶ್ವರ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಈ ಬಗ್ಗೆ ಮಾಹಿತಿ ನೀಡಿರುವ ಚುನಾವಣೆ ಆಯೋಗ, ಬಿಜೆಪಿಯವರು ನಿರ್ವಹಣೆ ಮಾಡುವ ಎಕ್ಸ್ ಖಾತೆಯಲ್ಲಿ ಇತ್ತೀಚೆಗೆ ಪೋಸ್ಟ್ ಪ್ರಕಟಿಸಲಾಗಿತ್ತು. ಈ ಬಗ್ಗೆ ಪರಿಶೀಲನೆ ನಡೆಸಿದ್ದ ಮಲ್ಲೇಶ್ವರ ವಿಧಾನಸಭಾ ಕ್ಷೇತ್ರದ ವಿಚಕ್ಷಣಾ ದಳದ ಅಧಿಕಾರಿಗಳು, ವರದಿ ಸಮೇತ ಪೊಲೀಸರಿಗೆ ದೂರು ನೀಡಿದ್ದಾರೆ ಎಂದು ತಿಳಿಸಿದೆ. ಪ್ರಕರಣದ ಬಗ್ಗೆ ಪ್ರತಿಕ್ರಿಯಿಸಿದ ಪೊಲೀಸರು, ಚುನಾವಣೆಯ ವಿಚಕ್ಷಣಾ ತಂಡದ ಅಧಿಕಾರಿಗಳು ದೂರು ನೀಡಿದ್ದಾರೆ. ಐಪಿಸಿ 153 (ಎರಡು ಧರ್ಮಗಳ ಜನರ ನಡುವೆ ವೈಷಮ್ಯ ಸೃಷ್ಟಿಸಲು ಗಲಭೆಗೆ ಪ್ರಚೋದನೆ) ಆರೋಪದಡಿ ಬಿಜೆಪಿ ಹಾಗೂ ಇತರರ ವಿರುದ್ಧ ಎಫ್‌ಐಆರ್ ದಾಖಲಿಸಿಕೊಳ್ಳಲಾಗಿದೆ' ಎಂದು ಹೇಳಿದರು.

ಮೋದಿ ಸರಕಾರದಿಂದ ಜನರಿಗೆ ಚೊಂಬು

ಬೆಂಗಳೂರು: ಕೇಂದ್ರದಲ್ಲಿ ಹತ್ತು ವರ್ಷ ಅಧಿಕಾರ ನಡೆಸಿದ ನರೇಂದ್ರ ಮೋದಿ ಅವರ ನೇತೃತ್ವದ ಬಿಜೆಪಿ ಸರಕಾರದ ಸಾಧನೆ ಕೇವಲ ಚೊಂಬು ಎಂದು ಸಚಿವ ಜಮೀರ್ ಅಹಮದ್ ಖಾನ್ ಲೇವಡಿ ಮಾಡಿದರು.

ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಅಲಿ ಖಾನ್ ಪರ ಚಾಮರಾಜಪೇಟೆ ಕ್ಷೇತ್ರದಲ್ಲಿ ರೋಡ್ ನಡೆಸಿ, ನಂತರ ಸಂಗಮ್ ವೃತ್ತದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿ, ಹತ್ತು ವರ್ಷ ಅಧಿಕಾರ ನಡೆಸಿದ ಬಿಜೆಪಿ ಐವತ್ತು ವರ್ಷ ದೇಶವನ್ನು ಹಿಂದಕ್ಕೆ ತೆಗೆದುಕೊಂಡು ಹೋಗಿದೆ. ಬಿಜೆಪಿ ಅಭಿವೃದ್ಧಿ ವಿಚಾರದಲ್ಲಿ ಮತ ಕೇಳುವುದಿಲ್ಲ, ಹಿಂದೂಮುಸ್ಲಿಂ ಎಂದು ಜನರನ್ನು ವಿಭಜನೆ ಮಾಡಿ ಕೋಮುಭಾವನೆ ಪ್ರಚೋದಿಸಿ ಸುಳ್ಳು ಹೇಳಿ ಜನರನ್ನು ವಂಚಿಸುತ್ತಿದೆ ಎಂದು ದೂರಿದರು.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಕೊಟ್ಟ ಮಾತಿನಂತೆ ಐದು ಗ್ಯಾರಂಟಿ ಅನುಷ್ಠಾನ ಮಾಡಿದೆ. ಆರನೇ ಗ್ಯಾರಂಟಿ ಆಗಿ ಬಡ ಕುಟುಂಬಗಳಿಗೆ 1.82 ಲಕ್ಷ ಮನೆಗಳನ್ನು ಹಂಚಿಕೆ ಮಾಡಲು ತೀರ್ಮಾನಿಸಿದೆ. ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದರೆ ಮಹಿಳೆಯರಿಗೆ ವಾರ್ಷಿಕ 1 ಲಕ್ಷ ರು. ಯುವ ನಿರುದ್ಯೋಗಿ ಪದವಿಧರರಿಗೆ 1 ಲಕ್ಷ ರು. ರೈತರ ಸಾಲ ಮನ್ನಾ ಭರವಸೆ ನೀಡಿದೆ. ಮತದಾರರು ಆಶೀರ್ವದಿಸಿದರೆ ಇವೆಲ್ಲವುಗಳನ್ನು ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

ಹಿಂದುಳಿದ ಜಾತಿ, ದಲಿತರ ಮೀಸಲನ್ನು ಕಿತ್ತು ಮುಸ್ಲಿಮರಿಗೆ ನೀಡಲು ಕಾಂಗ್ರೆಸ್ ಹೊರಟಿದೆ ಎಂದಿದ್ದ ಪ್ರಧಾನಿ ಮೋದಿ

ಪ್ರಧಾನಿ ಹೇಳಿಕೆ ಹಸಿ ಸುಳ್ಳು: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಹಿಂದುಳಿದ ಜಾತಿ ಮತ್ತು ದಲಿತರ ಮೀಸಲನ್ನು ಕಿತ್ತು ಮುಸ್ಲಿಮರಿಗೆ ನೀಡಲು ಕಾಂಗ್ರೆಸ್ ಹೊರಟಿದೆ ಎಂಬ ಪ್ರಧಾನಿ ನರೇಂದ್ರ ಮೋದಿ ಅವರ ಹೇಳಿಕೆಗೆ ಆಕ್ರೋಶ ವ್ಯಕ್ತಪಡಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಧಾನಿಯವರ ಹೇಳಿಕೆ ಹಸಿ ಸುಳ್ಳು ಎಂದಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿ, ಪ್ರಧಾನಿಯವರ ಹೇಳಿಕೆ ಅವರ ಅಜ್ಞಾನವನ್ನಷ್ಟೇ ಅಲ್ಲ ಸೋಲಿನ ಭೀತಿಯಲ್ಲಿರುವ ಹತಾಶೆಯನ್ನೂ ಸೂಚಿಸುತ್ತದೆ. ದೇಶದಲ್ಲಿ ಇಲ್ಲಿಯವರೆಗಿನ ಯಾರೂ ಕೂಡಾ ಪ್ರಧಾನಿ ಪಟ್ಟವನ್ನು ಇಂತಹ ಕೀಳು ಮಟ್ಟಕ್ಕೆ ಇಳಿಸಿಲ್ಲ. ಜವಾಬ್ದಾರಿ ಸ್ಥಾನದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಒಂದೋ ಈ ಬೇಜವಾಬ್ದಾರಿತನದ ಆರೋಪವನ್ನು ಆಧಾರಗಳನ್ನು ನೀಡಿ ಸಾಬೀತುಪಡಿಸಬೇಕು ಇಲ್ಲದೆ ಇದ್ದರೆ ದೇಶದ ಜನರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದ್ದಾರೆ.

ಅಲ್ಲದೆ, ಹಿಂದುಳಿದ ಜಾತಿ ಮತ್ತು ಎಸ್‌ಸಿ, ಎಸ್‌ಟಿ ಮೀಸಲು ಕಿತ್ತು ಮುಸ್ಲಿಮರಿಗೆ ನೀಡುವುದಾಗಿ ಕಾಂಗ್ರೆಸ್ ಎಲ್ಲಿ ಹೇಳಿದೆ? ಯಾವ ರಾಜ್ಯದ ಕಾಂಗ್ರೆಸ್ ಸರಕಾರ ಮಾಡಿದೆ? ಅದಕ್ಕೆ ಸಂಬಂಧಿಸಿದ ಸರಕಾರಿ ಆದೇಶದ ಪತ್ರ ಇದೆಯೇ? ಈ ಎಲ್ಲ ವಿವರವನ್ನು ಪ್ರಧಾನಿಯವರು ದೇಶದ ಮುಂದೆ ಇಡಬೇಕು ಎಂದು ಒತ್ತಾಯಿಸಿದ್ದಾರೆ.

ಕರ್ನಾಟಕದಲ್ಲಿ ರಾಜ್ಯ ಸರಕಾರ ಸ್ಥಾಪಿಸಿದ ಚಿನ್ನಪ್ಪ ರೆಡ್ಡಿ ಆಯೋಗದ ವರದಿ ಆಧಾರದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಯನ್ನು ಗಮನಕ್ಕೆ ತೆಗೆದುಕೊಂಡು ಮುಸ್ಲಿಮರನ್ನು

ಹಿಂದುಳಿದ ಜಾತಿಗಳ 2ಬಿ ವರ್ಗಕ್ಕೆ ಸೇರಿಸಲಾಗಿರುವುದು ನಿಜ. ಕಳೆದ ಮೂರು ದಶಕಗಳಿಂದ ರಾಜ್ಯದಲ್ಲಿ ಈ ಮೀಸಲು ಜಾರಿಯಲ್ಲಿದೆ. ಕೇಂದ್ರದಲ್ಲಿ ಹಿಂದೆ ಅಧಿಕಾರದಲ್ಲಿದ್ದ ಬಿಜೆಪಿ ಸರಕಾರವಾಗಲಿ, ಕಳೆದ 10 ವರ್ಷಗಳಿಂದ ಅಧಿಕಾರದಲ್ಲಿರುವ ನರೇಂದ್ರ ಮೋದಿ ನೇತೃತ್ವದ ಸರಕಾರವಾಗಲಿ ಇಲ್ಲಿಯವರೆಗೆ ಈ ಮೀಸಲು ಪ್ರಶ್ನಿಸಿಲ್ಲ, ಬಿಜೆಪಿಯೂ ಸೇರಿದಂತೆ ಯಾರೂ ಕೂಡಾ ಇದನ್ನು ನ್ಯಾಯಾಲಯದಲ್ಲೂ ಪ್ರಶ್ನಿಸಿಲ್ಲ ಎಂದಿದ್ದಾರೆ.

ರಾಜ್ಯದಲ್ಲಿ ಪರಿಶಿಷ್ಟ ಜಾತಿಯ ಮೀಸಲನ್ನು ಶೇ.15ರಿಂದ ಶೇ.17ಕ್ಕೆ ಮತ್ತು ಪರಿಶಿಷ್ಟ ಪಂಗಡಗಳ ಮೀಸಲನ್ನು ಶೇ. 3ರಿಂದ ಶೇ. 5ಕ್ಕೆ ಹೆಚ್ಚಿಸುವುದಾಗಿ ಹಿಂದಿನ ಬಿಜೆಪಿ ಸರಕಾರ ಘೋಷಿಸಿತ್ತು.

ಬೊಮ್ಮಾಯಿ ಸರಕಾರಕ್ಕೆ ಛೀಮಾರಿ ಹಾಕಿದ್ದ ಸುಪ್ರೀಂ

ಕಳೆದ ವಿಧಾನಸಭಾ ಚುನಾವಣೆಯ ಪೂರ್ವದಲ್ಲಿ ಧರ್ಮದ ಆಧಾರದಲ್ಲಿ ಮತವಿಭಜನೆಯ ಏಕೈಕ ದುರುದ್ದೇಶದಿಂದ ಬಸವರಾಜ ಬೊಮ್ಮಾಯಿ ಸರಕಾರ ಮೀಸಲನ್ನು ಅಡ್ಡಾದಿಡ್ಡಿಯಾಗಿ ಪರಿಷ್ಕರಿಸಲು ಹೊರಟು ಸುಪ್ರೀಂ ಕೋರ್ಟ್‌ನಿಂದ ಛೀಮಾರಿಗೆ ಗುರಿಯಾಗಿರುವುದನ್ನು ಪ್ರಧಾನಿ ನರೇಂದ್ರ ಮೋದಿ ಅವರು ಮರೆತಂತೆ ಕಾಣುತ್ತಿದೆ. ಮುಸ್ಲಿಮರಿಗೆ ಇದ್ದ ಶೇ. 4ರ ಮೀಸಲನ್ನು ರದ್ದು ಮಾಡಿ ಅದನ್ನು ಒಕ್ಕಲಿಗ ಮತ್ತು ಲಿಂಗಾಯತರಿಗೆ ಹಂಚಿರುವ ತೀರ್ಮಾನಕ್ಕೆ ಸುಪ್ರೀಂ ಕೋರ್ಟ್ ತಡೆ ನೀಡಿದ್ದು, ಮುಂದಿನ ಆದೇಶದವರೆಗೆ ಪರಿಷ್ಕೃತ ಮೀಸಲು ಜಾರಿಗೊಳಿಸಬಾರದೆಂದು ಆದೇಶ ನೀಡಿದೆ. ಇಂತಹದ್ದೊಂದು ಪ್ರಮುಖ ಮಾಹಿತಿ ಕೂಡಾ ಪ್ರಧಾನಮಂತ್ರಿಯವರ ಗಮನದಲ್ಲಿ ಇಲ್ಲದೆ ಇರುವುದು ವಿಷಾದನೀಯ ಎಂದು ಹೇಳಿದ್ದಾರೆ.

ಈ ಬಗ್ಗೆ ಕೇಂದ್ರ ಸರಕಾರಕ್ಕೂ ಪತ್ರ ಬರೆದಿರುವುದಾಗಿಯೂ ತಿಳಿಸಿತ್ತು. ಆದರೆ, ಇಂತಹ ಯಾವ ಪತ್ರ ಕೂಡಾ ರಾಜ್ಯದ ಬಿಜೆಪಿ ಸರಕಾರದಿಂದ ತಮಗೆ ಬಂದಿಲ್ಲ, ಆ ರೀತಿಯ ಮೀಸಲು ಏರಿಕೆಯ

ಮೋದಿ ಒಬ್ಬ ವಿಫಲ ಪ್ರಧಾನಿ

ಕಳೆದ ಹತ್ತು ವರ್ಷಗಳ ಕಾಲ ಆಡಳಿತ ನಡೆಸಿದರೂ ತಮ್ಮ ಸಾಧನೆಯ ಬಗ್ಗೆ ಹೇಳಲು ಏನೂ ಇಲ್ಲದಿರುವುದು ಪ್ರಧಾನಿ ನರೇಂದ್ರ ಮೋದಿ ಅವರು ಒಬ್ಬ ವಿಫಲ ಪ್ರಧಾನಿ ಎನ್ನುವುದನ್ನು ಸಾಬೀತುಪಡಿಸಿದೆ. ಒಬ್ಬ ಅನಕ್ಷರಸ್ಥ ಮಾತ್ರ ಈ ರೀತಿಯ ಆಧಾರ ರಹಿತ ಆರೋಪಗಳನ್ನು ಮಾಡಲು ಸಾಧ್ಯ. ಪ್ರಧಾನಿಯವರು ಸ್ವಯಂ ಪ್ರದರ್ಶಿಸುತ್ತಿರುವ ಅಜ್ಞಾನವನ್ನು ನೋಡಿದರೆ ಇವರ ಪದವಿ ಶಿಕ್ಷಣದ ಬಗೆಗಿನ ಸಂಶಯಗಳು ನಿಜ ಇರುವಂತೆ ಕಾಣಿಸುತ್ತದೆ. ಮುಸ್ಲಿಂ ಮೀಸಲು ವಿರೋಧಿಸುತ್ತಿರುವ ಪ್ರಧಾನಿ ನರೇಂದ್ರ ಮೋದಿ ಹೇಳಿಕೆ ಬಗ್ಗೆ ಮೋದಿಯವರ ಆಪ್ತಮಿತ್ರ ಮತ್ತು ಬಿಜೆಪಿಯ ಹೊಸ ಸಂಗಾತಿಯಾಗಿರುವ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಪ್ರತಿಕ್ರಿಯೆ ಏನು ಎನ್ನುವುದನ್ನು ನಾನು ತಿಳಿದುಕೊಳ್ಳಬಯಸುತ್ತೇನೆ ಎಂದಿದ್ದಾರೆ.

ಪ್ರಸ್ತಾವ ತಮ್ಮ ಪರಿಶೀಲನೆಯಲ್ಲಿ ಇಲ್ಲ ಎಂದು 2023ರ ಮಾ.14ರಂದು ಕೇಂದ್ರ ಸರಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ನಾರಾಯಣ ಸ್ವಾಮಿ ಅವರೇ ಲೋಕಸಭೆಗೆ ತಿಳಿಸಿದ್ದರು. ಸರಕಾರದ ಈ ನಿರ್ಧಾರ ಪ್ರಧಾನಿ ನರೇಂದ್ರಮೋದಿ ಅವರ ಗಮನಕ್ಕೆ ಬಂದಿರಲಿಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಅಣ್ಣಾವ್ರ 95ನೇ ಹುಟ್ಟುಹಬ್ಬದ ಕಾರ್ಯಕ್ರಮದಲ್ಲಿ ನಾಡೋಜ ಡಾ.ಮಹೇಶ ಜೋಶಿ ಅಭಿಮತ

ಡಾ.ರಾಜ್ ಕನ್ನಡಿಗರ ಅಭಿಮಾನದ ರೂಪಕ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಡಾ.ರಾಜ್ ಕುಮಾರ್ ಅವರು ಕನ್ನಡ ಸಂಸ್ಕೃತಿಯ ಪ್ರತೀಕದಂತಿದ್ದರು. ಕನ್ನಡಕ್ಕೊಬ್ಬನೇ ರಾಜ್ ಕುಮಾರ್ ಎನ್ನಿಸಿದ ಅವರು ತಮ್ಮ ಅಭಿನಯ ಮತ್ತು ಬದುಕಿನ ರೀತಿಯಿಂದ ಮಾದರಿ ಎನಿಸಿಕೊಂಡಿದ್ದರು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಡಾ.ಮಹೇಶ ಜೋಶಿ ಹೇಳಿದ್ದಾರೆ.

ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಹಮ್ಮಿಕೊಂಡಿದ್ದ ಡಾ. ರಾಜ್ ಕುಮಾರ್ ಅವರ 95ನೇ ಹುಟ್ಟು ಹಬ್ಬ ಕಾರ್ಯಕ್ರಮದಲ್ಲಿ ಮಾತನಾಡಿ, ವಿಜ್ಞಾನ ಕೊನೆಗೊಳ್ಳುವಲ್ಲಿ ಅಧ್ಯಾತ್ಮ ಆರಂಭವಾಗುತ್ತದೆ. ಸಂತ ಶ್ರೇಷ್ಠ ಕನಕದಾಸ, ಪುರಂದರ ದಾಸ, ಸರ್ವಜ್ಞ, ತುಕಾರಾಂ, ಕಬೀರ ಮೊದಲಾದವರ ಪಾತ್ರಗಳಿಗೆ ಜೀವ ತುಂಬಿದ ಹಾಗೆ ಇಮ್ಮಡಿ ಪುಲಕೇಶಿ, ಮಯೂರ, ಶ್ರೀಕೃಷ್ಣದೇವರಾಯ ಮೊದಲಾದ ಕನ್ನಡ ನಾಡಿನ ವೀರರನ್ನು ಬೆಳ್ಳಿತೆರೆಯ ಮೂಲಕ ಜೀವಂತವಾಗಿಸಿದವರು ರಾಜ್‌ಕುಮಾರ್. ರಾಮ, ಕೃಷ್ಣ, ನಾರದ ಮೊದಲಾದ ಪುರಾಣ ಪಾತ್ರಗಳನ್ನೂ ಅಭಿನಯಿಸಿದರು. ಬಾಂಡ್‌ನಿಂದ ಭಕ್ತನವರೆಗೆ, ಚಮ್ಮಾರನಿಂದ ಚಕ್ರವರ್ತಿಯವರೆಗೆ ಎಲ್ಲಾ ಮಾದರಿಯ ಪಾತ್ರಗಳನ್ನು ಮಾಡಿ ರಾಜ್ ಕುಮಾರ್ ಕನ್ನಡ ಸಾಂಸ್ಕೃತಿಕ ಲೋಕವನ್ನು ಶ್ರೀಮಂತಗೊಳಿಸಿದರು ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಪ್ರಕಟಣಾ ವಿಭಾಗದ ಸಂಚಾಲಕ ಎನ್.ಎಸ್.ಶ್ರೀಧರ ಮೂರ್ತಿ ಮಾತನಾಡಿ, ಸರಳತೆಯನ್ನು ಮೌಲ್ಯವಾಗಿ ಮಾಡಿದ ರಾಜ್ ಕುಮಾರ್ ಚಲನಚಿತ್ರಕ್ಕೆ ಸೀಮಿತವಾಗದೆ ನಮ್ಮ ಕಾಲದ ಸಾಂಸ್ಕೃತಿಕ ರೂಪಕವಾಗಿ ಬೆಳೆದಿದ್ದು ದೊಡ್ಡ ಕೌತಕ. ಎಲ್ಲಾ

ಡಾ.ರಾಜ್ ಕುಮಾರ್ 95ನೆಯ ಹುಟ್ಟು ಹಬ್ಬದ ಪ್ರಯುಕ್ತ ಅವರ ಭಾವಚಿತ್ರಕ್ಕೆ ಕಸಾಪ ಅಧ್ಯಕ್ಷ ಡಾ.ಮಹೇಶ್ ಜೋಶಿ ಪುಷ್ಪನಮನ ಸಲ್ಲಿಸಿದರು. ಪರಿಷತ್ತಿನ ಪ್ರಕಟಣಾ ವಿಭಾಗದ ಸಂಚಾಲಕ ಎನ್.ಎಸ್.ಶ್ರೀಧರ ಮೂರ್ತಿ, ಗೌರವ ಕಾರ್ಯದರ್ಶಿಗಳಾದ ನೇ.ಭ.ರಾಮಲಿಂಗ ಶೆಟ್ಟಿ, ಕೋಶಾಧ್ಯಕ್ಷ ಪಟೇಲ್ ಪಾಂಡು ಇದ್ದರು.

ರಾಜ್ ಹೋರಾಟಕ್ಕಿಳಿದರೆ ಸರಕಾರ ನಡುಗುತ್ತಿತ್ತು

ಕನ್ನಡ ಹೋರಾಟಗಾರ ರಾ.ನಂ.ಚಂದ್ರಶೇಖರ್ ಮಾತನಾಡಿ, ಗೋಕಾಕ್ ಚಳವಳಿ ಸಂದರ್ಭದಲ್ಲಿ ಕನ್ನಡಿಗರಿಗೆ ದೊಡ್ಡ ಭರವಸೆಯಾಗಿ ಬಂದವರು ಡಾ.ರಾಜ್ ಕುಮಾರ್. ಅವರು ಯಾವತ್ತೇ ಹೋರಾಟಕ್ಕೆ ಇಳಿದರೂ ಸರಕಾರ ನಡುಗುತ್ತಿತ್ತು. ಎಂ.ವಿ.ಸೀಯವರ ಅಂತಿಮ ದರ್ಶನ ಪಡೆಯಲು ನಾರು ಮಡಿ ಉಟ್ಟು ಬಂದಿದ್ದ ರಾಜ್‌ಕುಮಾರ್ ನಮ್ಮ ನಡುವಿನ ಸಂತ. ಲೌಕಿಕದಲ್ಲಿ ಇದ್ದೂ ಅವರು ಅಲೌಕಿಕದ ನಡೆಯನ್ನು ಸಾಧಿಸಿದ್ದರು ಎಂದರು.

ತಲೆಮಾರಿನವರೂ ತಮ್ಮ ಪಾಲಿನ ಆದರ್ಶವನ್ನು ರಾಜ್ ಕುಮಾರ್ ಎನ್ನುವ ಕನ್ನಡಿಯಲ್ಲಿ ಕಂಡರು. ರಾಜಕೀಯದಿಂದ ದೂರವಿದ್ದ ರಾಜ್‌ಕುಮಾರ್ ತಮ್ಮ ಚಿತ್ರಗಳಲ್ಲಿ ಎಂದಿಗೂ ರಾಜಕಾರಣಿ, ಜಮೀನ್ದಾರ, ಊರ ಗೌಡರ ಪಾತ್ರಗಳನ್ನು ಮಾಡಲಿಲ್ಲ ಮೇಯರ್ ಮುತ್ತಣ್ಣ ಚಿತ್ರದಲ್ಲಿ ಅವರು ಮೇಯರ್ ಆದರೂ ಅದಕ್ಕೆ ಸಂಬಂಧಿಸಿದ ಸನ್ನಿವೇಶಗಳಿಲ್ಲ ಎಂದು ವಿಶ್ಲೇಷಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ ನೇ.ಭ.ರಾಮಲಿಂಗ ಶೆಟ್ಟಿ, ಡಾ.ಪದ್ಮಿನಿ ನಾಗರಾಜು, ಕೋಶಾಧ್ಯಕ್ಷ ಪಟೇಲ್ ಪಾಂಡು, ಹಿರಿಯ ಪತ್ರಕರ್ತ ಪ್ರಶಾಂತ್ ಹೆಬ್ಬಾರ್ ಮತ್ತು ಕನ್ನಡ ಸಾಹಿತ್ಯ ಪರಿಷತ್ತಿನ ಸಿಬ್ಬಂದಿ ಇದ್ದರು.



ಬೆಂಗಳೂರು ಕೇಂದ್ರ ಕಾಂಗ್ರೆಸ್ ಅಭ್ಯರ್ಥಿ ಮನ್ಸೂರ್ ಆಲಿ ಖಾನ್ ಅವರು ಶಾಂತಿನಗರದಲ್ಲಿ ಮತಯಾಚಿಸಿದರು. ಈ ವೇಳೆ ಕೆಪಿಸಿಸಿ ಯುವ ಘಟಕದ ರಾಜ್ಯಾಧ್ಯಕ್ಷ ಮೊಹ್ಮದ್ ನಲಪಾಡ್ ಇದ್ದರು

ಬೆಂಗಳೂರಿಗೆ ಆಗಮಿಸಿದ್ದ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಅವರನ್ನು ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಸೌಮ್ಯ ರೆಡ್ಡಿ, ಡಾ.ಶಂಕರ್ ಗುರು ಮತ್ತು ಗುರುರಾಘವೇಂದ್ರ ಬ್ಯಾಂಕ್‌ನ ಠೇವಣಿದಾರರು ಭೇಟಿಯಾದರು.

ರವೀಂದ್ರ ಕಲಾಕ್ಷೇತ್ರದಲ್ಲಿ ನಡೆದ ಡಾ.ರಾಜ್ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ರಾಘಣ್ಣ ಅಭಿಮತ

ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಿ

ಬೆಂಗಳೂರು: ಜೀವನದಲ್ಲಿ ಸೋಲು-ಗೆಲುವು ಎರಡನ್ನೂ ಸಮನಾಗಿ ಸ್ವೀಕರಿಸಿ ಸೋಲನ್ನು ಮನಸ್ಸಿಗೆ ಹಾಗೂ ಗೆಲುವನ್ನು ತಲೆಗೆ ಹಾಕಿಕೊಳ್ಳದೆ ಮುನ್ನಡೆಯಬೇಕು ಎಂದು ನಮ್ಮ ತಂದೆ ವರನಟ ಡಾ.ರಾಜ್ ಕುಮಾರ್ ನಮಗೆ ಕಿವಿಮಾತು ಹೇಳಿದ್ದರು ಎಂದು ಚಿತ್ರನಟ ರಾಘವೇಂದ್ರ ರಾಜಕುಮಾರ್ ಹೇಳಿದ್ದಾರೆ.

ರವೀಂದ್ರ ಕಲಾಕ್ಷೇತ್ರದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ವರನಟ ಡಾ.ರಾಜ್ ಕುಮಾರ್‌ರ 96ನೇ ಜನ್ಮದಿನಾಚರಣೆಯಲ್ಲಿ ಮಾತನಾಡಿ, ಸಹನಟರು, ಮಕ್ಕಳು, ಕುಟುಂಬ ವರ್ಗದವರಿಗೆ ಡಾ.ರಾಜ್ ಕುಮಾರ್ ಅಪರಿಮಿತ ಪ್ರೀತಿ ತೋರಿಸುತ್ತಿದ್ದರು. ಎಷ್ಟೇ ಪ್ರಖ್ಯಾತಿ ಗಳಿಸಿದ್ದರೂ ಅದನ್ನು ತೋರ್ಪಡಿಸದೇ ಸರಳವಾಗಿ ಜೀವಿಸಿದ ವ್ಯಕ್ತಿ. ಅವರು ನಮಗೆ ತೋರಿಸಿದ ಹಾದಿ, ಜೀವಿಸಿದ ರೀತಿ ಇಂದಿಗೂ ದಾರಿದೀಪವಾಗಿದೆ ಎಂದು ತಿಳಿಸಿದರು.

ಹಿರಿಯ ಕಲಾವಿದ ಶ್ರೀನಿವಾಸ ಮೂರ್ತಿ ಮಾತನಾಡಿ, ಡಾ.ರಾಜ್ ಕುಮಾರ್‌ರಿಗೆ ಸರಿಸಾಟಿಯಾದ ಯಾವೊಬ್ಬ ನಟನೂ ಇಲ್ಲ. ಅವರು ಯಾವ ಪಾತ್ರವಾದರೂ ಅದಕ್ಕೆ ಜೀವ

ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಡಾ.ರಾಜ್‌ಕುಮಾರ್ 96ನೇ ಜನ್ಮದಿನಾಚರಣೆಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು.

ತುಂಬಿ ನಟಿಸುತ್ತಿದ್ದರು. ನಿತ್ಯ ಪ್ರಸಾರವಾಗುವ ಹಾಡುಗಳು ಚಿತ್ರಗಳ ಮೂಲಕ ರಾಜ್ ಕುಮಾರ್ ಇನ್ನೂ ಜೀವಂತವಾಗಿದ್ದಾರೆ. ಸಾವಿರಾರು ಅಭಿಮಾನಿಗಳನ್ನು ಹೊಂದಿದ ಅವರಿಗೆ ಜನರ ಮನಸ್ಸಿನಲ್ಲಿ ವಿಶೇಷ ಸ್ಥಾನ ದೊರೆತಿದೆ ಎಂದರು.

ಚಲನಚಿತ್ರ ನಿರ್ದೇಶಕ ಪಿ.ಶೇಷಾದ್ರಿ, ಡಾ.ರಾಜ್ ಕುಮಾರ್ ಕುರಿತು ರಾಕೋಜಿರಾವ್ ಸಂಪಾದಿಸಿದ ಎರಡು ಸಾವಿರ ಪುಟಗಳ (ಚಿತ್ರ ಸಹಿತ) ಎರಡು ಪುಸ್ತಕಗಳು ಹಾಗೂ ಇನ್ನೂ ಅನೇಕ ಪುಸ್ತಕಗಳು ಸೇರಿದಂತೆ ಡಾ.ರಾಜ್ ಕುಮಾರ್ ಕುರಿತಾಗಿ ಸುಮಾರು 10 ಸಾವಿರ ಪುಟಗಳ ಬರವಣಿಗೆ ನಮ್ಮ ಮುಂದಿದೆ ಎಂದರು.

ಕಾರ್ಯಕ್ರಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿ ತ್ರಿಲೋಕ ಚಂದ್ರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಸುರಳ್ಕರ್ ವಿಕಾಸ್ ಕಿಶೋರ್, ಜಂಟಿ ನಿರ್ದೇಶಕ ಮಂಜುನಾಥ ಡೊಳ್ಳಿನ್ ಇದ್ದರು.

ಕಾರ್ಯಕ್ರಮದಲ್ಲಿ ಕಂಬದ ರಂಗಯ್ಯ ಮತ್ತು ತಂಡದವರು ಡಾ.ರಾಜ್ ಕುಮಾರ್ ಚಿತ್ರಗೀತೆಗಳನ್ನು ಪ್ರಸ್ತುತಪಡಿಸಿದರು.

ಪೌರಾಣಿಕ ಪಾತ್ರಗಳಿಗೆ ಜೀವಕಳೆ ತುಂಬುತ್ತಿದ್ದ ರಾಜ್ ಕುಮಾರ್ ಒಬ್ಬ ಮೇರುನಟರಾಗಿದ್ದರು. ಮಯೂರ, ಇಮ್ಮಡಿ ಪುಲಕೇಶಿ, ಬಸವಣ್ಣ, ಶ್ರೀರಾಘವೇಂದ್ರ, ಶ್ರೀ ಕೃಷ್ಣದೇವ ರಾಯ ಮುಂತಾದ ಪಾತ್ರಗಳಲ್ಲಿ ನಟಿಸಿರುವ ಅವರು ನಿಜವಾಗಿಯೂ ಅದೇ ವ್ಯಕ್ತಿಯ ಪ್ರತಿರೂಪವೇನೋ ಎಂಬಂತೆ ನಮಗೆ ಕಾಣುತ್ತಾರೆ. ಕನ್ನಡ ಚಿತ್ರಂಗಕ್ಕೆ ದೊರಕಿದ ಅಪರೂಪದ ರತ್ನ, ವರನಟ ಡಾ. ರಾಜ್ ಕುಮಾರ್.

- ಪಿ.ಶೇಷಾದ್ರಿ ಚಲನಚಿತ್ರ ನಿರ್ದೇಶಕ

ಕೃಪಾನಿಧಿ ಇನ್‌ಸ್ಟಿಟ್ಯೂಟ್‌ನ ವಿದ್ಯಾರ್ಥಿಗಳಿಗೆ ಮತದಾನದ ಜಾಗೃತಿ

ಯಾರ ಆಮಿಷಕ್ಕೂ ಒಳಗಾಗದೆ ಸ್ವಇಚ್ಛೆಯಿಂದ ಮತ ಚಲಾಯಿಸಿ

ಬೆಂಗಳೂರು: ಮತದಾರರು ಯಾವುದೇ ಆಮಿಷಕ್ಕೊಳಗಾಗದೆ ಸ್ವ ಇಚ್ಛೆಯಿಂದ ಮತ ಚಲಾಯಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ತುಷಾರ್ ಗಿರಿನಾಥ್ ವಿದ್ಯಾರ್ಥಿಗಳಿಗೆ ಸಲಹೆ ಮಾಡಿದ್ದಾರೆ.

ಮಹದೇವಪುರದ ಗುಂಜೂರು ಬಳಿಯಿರುವ ಕೃಪಾನಿಧಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಟ್‌ನಲ್ಲಿ ಆಯೋಜಿಸಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿ, ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ನಾವೆಲ್ಲರೂ ಮತದಾನದ ಪ್ರಮಾಣವನ್ನು ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಎಲ್ಲರೂ ಸ್ವಯಿಚ್ಛೆಯಿಂದ ಮುಂದೆ ಬಂದು ಮತದಾನ ಮಾಡಬೇಕು ಎಂದರು.

ನಿಮ್ಮ ಹೆಸರು ಮತದಾರರ ಪಟ್ಟಿಯಲ್ಲಿದ್ದು, ನೀವು ಮತದಾನ ಮಾಡದಿರುವುದು ತಪ್ಪಾಗುತ್ತದೆ. ಆಮಿಷಕ್ಕೊಳಗಾಗಿ ಮತದಾನ ಮಾಡಿದರೆ ಅದು ಅಪರಾಧವಾಗಲಿದೆ. ನಿಮಗೆ ಉತ್ತಮ ಅಭ್ಯರ್ಥಿಯನ್ನು ಆಯ್ಕೆ ಮಾಡುವ ವಿವೇಚನೆಯಿದ್ದು, ಅದರಂತೆ ಮತದಾನ ಮಾಡಬೇಕು ಎಂದು ಹೇಳಿದರು.

ಚುನಾವಣೆಯ ಸಮಯದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಚುನಾವಣಾಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳು ಎಲ್ಲಾ ಕಡೆ ನಿಗಾ ವಹಿಸಿ ಸಕ್ರಿಯವಾಗಿ ಕಾರ್ಯನಿರ್ವಹಿಸಲಿದ್ದಾರೆ. ನಿಮಗೇ ನಾದರು ಆಮಿಷದ ಕುರಿತು ಮಾಹಿತಿ ಲಭ್ಯವಾದಲ್ಲಿ ಕೂಡಲೆ ಸಿವಿಜಿಲ್ ತಂತ್ರಾಂಶದಲ್ಲಿ ಅಪ್ಲೋಡ್

ನಿಮ್ಮ ಮತ ಬೆಂಗಳೂರಿನಲ್ಲಿ ಇಲ್ಲವಾದರೆ ನಿಮ್ಮ ಊರುಗಳಿಗೆ ತೆರಳಿ ಮತದಾನ ಚಲಾಯಿಸುವ ಮೂಲಕ ಪ್ರಜಾಪ್ರಭುತ್ವಕ್ಕೆ ಗೌರವ ತರುವ ಕೆಲಸ ಮಾಡಬೇಕು. ಈ ನಿಟ್ಟಿನಲ್ಲಿ ಎಲ್ಲರೂ ಮತದಾನದ ದಿನ ತಮ್ಮ-ತಮ್ಮ ಊರುಗಳಿಗೆ ತೆರಳಿ ತಪ್ಪದೆ ಮತದಾನ ಮಾಡಿ.

-ತುಷಾರ್ ಗಿರಿನಾಥ್
ಜಿಲ್ಲಾ ಚುನಾವಣಾಧಿಕಾರಿ

ಮಾಡಿದರೆ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸೂಕ್ತ ಕ್ರಮ ಕೈಗೊಳ್ಳಲಿದ್ದಾರೆ ಎಂದು ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಕಾಂತರಾಜು, ಮಹದೇವಪುರ ವಲಯ ಆಯುಕ್ತ ರಮೇಶ್, ವಲಯ ಜಂಟಿ ಆಯುಕ್ತ ದಾಕ್ಷಾಯಿಣಿ, ಕೃಪಾನಿಧಿ ಕಾಲೇಜಿನ ನಿರ್ದೇಶಕ ಡಾ. ಸ್ಯಾಮ್ ಫಾಲ್, ಉಪಾಧ್ಯಕ್ಷ ಗೀತಾ ನಾಗ್‌ಪಾಲ್, 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸೇರಿದಂತೆ ಇನ್ನಿತರೆ ಅಧಿಕಾರಿಗಳು ಇದ್ದರು.